ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ ವಾರ್ತಾಪತ್ರಿಕೆ


ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

ಸಂಪುಟ : 2 । ಸಂಚಿಕೆ : 9 | ನವೆಂಬರ್ : 2020 | ಪುಟಗಳು : 20 । ಬೆಲೆ : 25/–





## ರಾಜ್ಯದ ಎಲ್ಲಾ ಸಹಕಾರಿ ಬಂಧುಗಳಿಗೆ 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಶುಭಾಷಯಗಳು

ನವೆಂಬರ್ : 14 ರಿಂದ 20ರವರೆಗೆ 2020



ಶ್ರೀಮತಿ ಕೆ. ಲಲಿತ ಜಿ.ಟಿ.ದೇವೇಗೌಡ
ಅಧ್ಯಕ್ಷರು





ಡಾ. ಬಿ.ಡಿ. ಭೂಕಾಂತ
ಉಪಾಧ್ಯಕ್ಷರು

ಆಡಳಿತ ಮಂಡಳಿ ಸದಸ್ಯರು,
ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ, ಬೆಂಗಳೂರು.

# ನವೆಂಬರ್ 14 ರಿಂದ 67ನೇ ಅಖಿಲ ಭಾರತ ಸಹಕಾರ ಸಪ್ತಾಹ : ಸರಳ ಆಚರಣೆಗೆ ಸಚಿವ ಎಸ್.ಟಿ. ಸೋಮಶೇಖರ್ ಸಲಹೆ



**ಬೆಂಗಳೂರು** : ನವೆಂಬರ್ 14 ರಿಂದ ನವೆಂಬರ್ 20ರವರೆಗೆ ರಾಜ್ಯದಾದ್ಯಂತ 67ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಕೋವಿಡ್ ಹಿನ್ನೆಲೆಯಲ್ಲಿ ಸರಳವಾಗಿ ಆಚರಿಸಲು ಸಹಕಾರ ಸಚಿವ ಎಸ್.ಟಿ.ಸೋಮಶೇಖರ್ ಅವರು ಸಹಕಾರಿಗಳಿಗೆ ಸಲಹೆ ಮಾಡಿದರು. ಬೆಂಗಳೂರಿನಲ್ಲಿ ನಡೆದ 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಪೂರ್ವಭಾವಿ ಸಭೆಯ ನಂತರ ಮಾಹಿತಿ ನೀಡಿದರು.

ನವೆಂಬರ್ 14 ರಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಹಕಾರ ಸಪ್ತಾಹವನ್ನು ಉದ್ಘಾಟಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಸಹಕಾರ ಚಳವಳಿಗೆ ಗಣನೀಯ ಸೇವೆ ಸಲ್ಲಿಸಿರುವ ಸಹಕಾರಿಗಳನ್ನು ಗುರುತಿಸಿ ರಾಜ್ಯಮಟ್ಟದ "ಸಹಕಾರ ರತ್ನ" ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದ ಅವರು, ಸಪ್ತಾಹ ಕಾರ್ಯಕ್ರಮವನ್ನು ವಿವಿಧ ಸಹಕಾರ ಮಹಾಮಂಡಳಗಳು, ರಾಜ್ಯದ ಎಲ್ಲಾ ಸಹಕಾರಿ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಆಯಾ ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರ ಮಾರ್ಗದರ್ಶನದಲ್ಲಿ ಕ್ರಮವಾಗಿ ಮಂಗಳೂರು, ದಾವಣಗೆರೆ, ಚಿಕ್ಕಬಳ್ಳಾಪುರ, ಬೆಳಗಾವಿ, ಹೊಸಪೇಟೆ ಮತ್ತು ಸಮಾರೋಪ ಸಮಾರಂಭವನ್ನು ವಿಜಯಪುರದಲ್ಲಿ ಆಚರಿಸಲು ತೀರ್ಮಾನಿಸಲಾಗಿದೆ ಎಂದರು.

ರಾಜ್ಯದಾದ್ಯಂತ 7 ದಿನಗಳ ಕಾಲ ನಡೆಯುವ ಕಾರ್ಯಕ್ರಮದಲ್ಲಿ ಸಹಕಾರಿಗಳು ಮತ್ತು ಅಧಿಕಾರಿ/ಸಿಬ್ಬಂದಿ ವರ್ಗದವರು ಮಾಸ್ಕ್ ಧರಿಸಿ, ಸಾಮಾಜಿಕ ಅಂತರ ಕಾಪಾಡಿಕೊಂಡು ಸಪ್ತಾಹ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಹಾಗೂ ಯಶಸ್ವಿಯಾಗಿ ಆಚರಿಸಲು ಸಚಿವರು ಸಲಹೆ ಮಾಡಿದರು.

ಆತ್ಮನಿರ್ಭರ ಯೋಜನೆ ಅಡಿಯಲ್ಲಿ ಆರ್ಥಿಕವಾಗಿ ದುರ್ಬಲರಾದ ಜನರಿಗೆ ನೆರವು ನೀಡುವ ಆರ್ಥಿಕ ಸ್ಪಂದನ ಕಾರ್ಯಕ್ರಮದ ಮೂಲಕ ರಾಜ್ಯದಾದ್ಯಂತ 39,300 ಕೋಟಿ ರೂಪಾಯಿಗಳ ನೆರವು ನೀಡಲಾಗುತ್ತಿದೆ ಎಂದರು.

ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಟಿ. ದೇವೇಗೌಡ, ಸಹಕಾರ ಇಲಾಖಾ ಪ್ರಧಾನ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಸಹಕಾರ ಸಂಘಗಳ ನಿಬಂಧಕರಾದ ಎಸ್. ಜಿಯಾವುಲ್ಲಾ, ಮಾರಾಟ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಡಾ. ಎಂ.ಎನ್. ರಾಜೇಂದ್ರ ಕುಮಾರ್, ಸೌಹಾರ್ದ ಸಂಯುಕ್ತ ಸಹಕಾರಿಯ ಅಧ್ಯಕ್ಷರಾದ ಬಿ.ಎಚ್. ಕೃಷ್ಣಾರೆಡ್ಡಿ, ಮೀನುಗಾರರ ಮಹಾಮಂಡಳದ ಅಧ್ಯಕ್ಷರಾದ ಮಾದೇಗೌಡ, ಬಳ್ಳಾರಿ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾದ ಟಿ.ಎಂ. ಚಂದ್ರಶೇಖರಯ್ಯ, ರಾಯಚೂರು ಜಿಲ್ಲಾ ಸಹಕಾರ ಯೂನಿಯನ್ನಿನ ಅಧ್ಯಕ್ಷರಾದ ವಿಜಯಕುಮಾರ್ ಪಾಟೀಲ್, ಚಿಕ್ಕಬಳ್ಳಾಪುರ ಯೂನಿಯನ್ ಅಧ್ಯಕ್ಷರಾದ ಎಚ್.ವಿ. ನಾಗರಾಜ್, ಬೆಂಗಳೂರು ನಗರ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರಾದ ಕೆ. ವಿಜಯಕುಮಾರ್, ಶಿವಮೊಗ್ಗ ಹಾಲು ಒಕ್ಕೂಟದ ಅಧ್ಯಕ್ಷರಾದ ಡಿ.ಆನಂದ್, ತುಮಕೂರು ಹಾಲು ಒಕ್ಕೂಟದ ಅಧ್ಯಕ್ಷರಾದ ಸಿ.ವಿ. ಮಹಾಲಿಂಗಪ್ಪ, ರಾಜ್ಯ ವಿಮಾ ಸಹಕಾರ ಸಂಘದ ಅಧ್ಯಕ್ಷರಾದ ಡಿ. ಹನುಮಂತಯ್ಯ, ಪತ್ತಿನ ಮಹಾಮಂಡಳದ ನಿರ್ದೇಶಕ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ, ದಾವಣಗೆರೆ ಯೂನಿಯನ್ ಅಧ್ಯಕ್ಷರಾದ ಎನ್.ಎ. ಮುರುಗೇಶ್, ಬಮುಲ್ ಅಧ್ಯಕ್ಷರಾದ ನರಸಿಂಹಮೂರ್ತಿ ಅವರುಗಳು ಸೇರಿದಂತೆ ವಿವಿಧ ಸಹಕಾರ ಸಂಸ್ಥೆಗಳ ಮುಖಂಡರು, ವಿವಿಧ ಮಹಾಮಂಡಳಗಳ ವ್ಯವಸ್ಥಾಪಕ ನಿರ್ದೇಶಕರುಗಳು, ಇಲಾಖೆಯ ಅಪರ ನಿಬಂಧಕರುಗಳು, ಜಂಟಿ ನಿಬಂಧಕರುಗಳು ಹಾಗೂ ಉಪನಿಬಂಧಕರುಗಳು ಉಪಸ್ಥಿತರಿದ್ದರು.

ಸಭೆಯ ಆರಂಭದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಆಡಳಿತಾಧಿಕಾರಿ ವೈ.ಹೆಚ್. ಗೋಪಾಲಕೃಷ್ಣ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಗಣ್ಯರನ್ನು ಸ್ವಾಗತಿಸಿದರು. ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಎನ್. ಅರುಣ್‌ಕುಮಾರ್ ಅವರು ಉಪಸ್ಥಿತರಿದ್ದರು. ಕೊನೆಯಲ್ಲಿ ಮಹಾಮಂಡಳದ ಕಾರ್ಯದರ್ಶಿ ಲಕ್ಷ್ಮಿಪತಯ್ಯ ಅವರು ವಂದನಾರ್ಪಣೆ ಸಲ್ಲಿಸಿದರು.

# “ಇ–ಸ್ಟಾಂಪಿಂಗ್ ಉಪ ಕೇಂದ್ರದ ಉದ್ಘಾಟನೆ”





ಬೆಂಗಳೂರು: ಇತ್ತೀಚೆಗೆ ಮಹಾಮಂಡಳದ ಸದಸ್ಯ ಸಹಕಾರ ಸಂಘವಾದ “ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ” ನೂತನ ಇ–ಸ್ಟಾಂಪಿಂಗ್ ಉಪ ಕೇಂದ್ರವನ್ನು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕರಾದ ಶ್ರೀ ಕೆ.ಕೆ.ಮಹೇಂದ್ರ ಪ್ರಸಾದ್‌ಗೌಡ ಮತ್ತು ಸಂಘದ ಅಧ್ಯಕ್ಷರು, ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕಿನ ಮಾಜಿ ನಿರ್ದೇಶಕರು ಹಾಗೂ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸದಸ್ಯರು ಆದ ಶ್ರೀ ಹನುಮಂತಯ್ಯರವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರು, ನಿರ್ದೇಶಕರು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.


## ಜಾಹಿರಾತು ಮನವಿ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ. ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9008407988, ದೂರವಾಣಿ : 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org, ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು “ಸಹಕಾರ ಮಾಸಿಕ ವಾರ್ತಾ ಪತ್ರಿಕೆ”ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

**– ಸಂಪಾದಕರು**

SAHAKARA VARTHA PATHRIKE KANNADA MONTHLY
RNI-REG NO : KARKAN/2018/75796
POST REG NO : KA/BGW-1816/2019-2021
POSTING DATE : 1 & 5TH EVERY MONTH
POSTED AT : P/C RMS BHAVAN, BANGALORE PSO, Blore-26
PUBLISHED ON : 29TH of Previous Month

# 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಶುಭಾಷಯಗಳು

## ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತಮಂಡಳಿ



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು



ಡಾ. ಬಿ.ಡಿ. ಭೂಕಾಂತ
ಉಪಾಧ್ಯಕ್ಷರು



ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು



ಶ್ರೀ ವಿ. ರಾಜು
ನಿರ್ದೇಶಕರು



ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು



ಶ್ರೀ ಎಂ.ಜೆ. ನರೇಂದ್ರ ಕುಮಾರ
ನಿರ್ದೇಶಕರು



ಶ್ರೀ ಡಿ. ಚನ್ನಯ್ಯ
ನಿರ್ದೇಶಕರು



ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ನಿರ್ದೇಶಕರು



ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು



ಶ್ರೀ ಧರೇಪ್ಪ ಎಂ. ಅಲಗೂರ
ನಿರ್ದೇಶಕರು



ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ
ನಿರ್ದೇಶಕರು



ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು



ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು



ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು



ಶ್ರೀ ಹೆಚ್.ಟಿ. ನಾಗೇಶ್
ನಿರ್ದೇಶಕರು



ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು



ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು



ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು



ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು



ಶ್ರೀ ಕೆ.ಎಸ್.ಗುರುಪ್ರಸಾದ್
ಸಲಹೆಗಾರರು



ಶ್ರೀಮತಿ ಪಿ.ಆಶಾಲತಾ
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.